ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

(4)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 26/11/20

# ಸಭಾಪತಿ ವಿರುದ್ಧ ಬಿಜೆಪಿ ಅವಿಶ್ವಾಸ

ಬೆಂಗಳೂರು: ವಿಧಾನಪರಿಷತ್ ಸಭಾಪತಿ ಪ್ರತಾಪಚಂದ್ರಶೆಟ್ಟಿ ವಿರುದ್ಧ ಬಿಜೆಪಿ ಸದಸ್ಯರು ಅವಿಶ್ವಾಸ ನಿರ್ಣಯ ಮಂಡಿಸಲು ತೀರ್ಮಾನಿಸಿದ್ದಾರೆ. ವಿಧಾನಪರಿಷತ್ ಕಾರ್ಯದರ್ಶಿಗಳಿಗೆ ಈ ಕುರಿತು ಬಿಜೆಪಿಯ ಸದಸ್ಯರು ನೋಟಿಸ್ ನೀಡಿದ್ದು, ಶಾಸಕಾಂಗ ಕರ್ತವ್ಯ ನಿರ್ವಹಣೆಯಲ್ಲಿ ಪಕ್ಷಪಾತಿಯಾಗಿದ್ದು ಈ ಮೂಲಕ ಸಂವಿಧಾನದ ಆಶಯಗಳಿಗೆ ಧಕ್ಕೆ ತಂದಿದ್ದಾರೆ ಎಂದು ಆರೋಪಿಸಿದ್ದಾರೆ. ಡಿ.7 ರಿಂದ ಆರಂಭವಾಗಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಅವಿಶ್ವಾಸ ನಿರ್ಣಯ ಚರ್ಚೆಗೆ ಬರುವ ಸಾಧ್ಯತೆಯಿದೆ.

▶ ವಿವರ: 5

# ಸಭಾಪತಿ ವಿರುದ್ಧ ಅವಿಶ್ವಾಸ


ಬಿಜೆಪಿ-ಜೆಡಿಎಸ್ ಮಧ್ಯೆ ಸಭಾಪತಿ ದೋಸ್ತಿ

ಸಭಾಪತಿ ವಿರುದ್ಧ ಜೆಡಿಎಸ್ ಬೆಂಬಲದೊಂದಿಗೆ ಅವಿಶ್ವಾಸ ನಿರ್ಣಯ ಮಂಡಿಸಲು ಬಿಜೆಪಿ ತೀರ್ಮಾನಿಸಿದ್ದ ಕುರಿತು 'ಉದಯವಾಣಿ' ನ.12 ರಂದು ವಿಶೇಷ ವರದಿ ಮಾಡಿತ್ತು.

**ಬೆಂಗಳೂರು:** ವಿಧಾನಪರಿಷತ್ ಸಭಾಪತಿ ಪ್ರತಾಪಚಂದ್ರಶೆಟ್ಟಿ ವಿರುದ್ಧ ಬಿಜೆಪಿ ಸದಸ್ಯರು ಅವಿಶ್ವಾಸ ನಿರ್ಣಯ ಮಂಡಿಸಲು ತೀರ್ಮಾನಿಸಿದ್ದಾರೆ.

ವಿಧಾನಪರಿಷತ್ ಕಾರ್ಯದರ್ಶಿಗಳಿಗೆ ಈ ಕುರಿತು ಬಿಜೆಪಿಯ ಸದಸ್ಯರು ನೋಟಿಸ್ ನೀಡಿದ್ದು ಶಾಸಕಾಂಗ ಕರ್ತವ್ಯ ನಿರ್ವಹಣೆಯಲ್ಲಿ ಪಕ್ಷಪಾತಿಯಾಗಿದ್ದು ಈ ಮೂಲಕ ಸಂವಿಧಾನದ ಆಶಯಗಳಿಗೆ ಧಕ್ಕೆ ತಂದಿದ್ದಾರೆ ಎಂದು ಆರೋಪಿಸಿದ್ದಾರೆ.

ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 165 ಹಾಗೂ ಭಾರತೀಯ ಸಂವಿಧಾನದ 183 ನೆಯ ಅನುಚ್ಛೇದ (ಸಿ) ಖಂಡದ ಅಡಿಯಲ್ಲಿ ಕರ್ನಾಟಕ ವಿಧಾನಪರಿಷತ್‌ನ ಸಭಾಪತಿಯವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುತ್ತಿದ್ದೇವೆ ಎಂದು ತಿಳಿಸಿದ್ದಾರೆ. ಡಿ.7 ರಿಂದ ಆರಂಭವಾಗಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಅವಿಶ್ವಾಸ ನಿರ್ಣಯ ಕುರಿತು ಚರ್ಚೆಗೆ ಬರುವ ಸಾಧ್ಯತೆಯಿದೆ.

ತೇಜಸ್ವಿನಿಗೌಡ, ಆಯನೂರು ಮಂಜುನಾಥ್, ವೈ.ಎ.ನಾರಾಯಣ ಸ್ವಾಮಿ, ಹಣಮಂತ ರುದ್ರಪ್ಪ ನಿರಾಣಿ, ಬಿ.ಜಿ.ಪಾಟೀಲ್, ಲೆಹರ್‌ಸಿಂಗ್, ಭಾರತಿ ಶೆಟ್ಟಿ, ಮಹಂತೇಶ್ ಕವಟಗಿಮಠ, ಪುಟ್ಟಣ್ಣ, ಅ. ದೇವೇಗೌಡ ಅವರು ಸೂಚನೆಗೆ ಸಹಿ ಮಾಡಿದ್ದಾರೆ.

ಪರಿಷತ್‌ನಲ್ಲಿ ಮಹತ್ವದ ವಿಧೇಯಕಗಳ ಅಂಗೀಕಾರವಾಗದೆ ಆಡಳಿತಾರೂಢ ಬಿಜೆಪಿಗೆ ಮುಜುಗರ ಉಂಟಾಗುತ್ತಿದ್ದ ಕಾರಣ ಹಾಗೂ ಬಿಜೆಪಿಯು ಜೆಡಿಎಸ್ ಬೆಂಬಲ ಪಡೆದು ಅವಿಶ್ವಾಸ ನಿರ್ಣಯಕ್ಕೆ ಮುಂದಾಗಿದೆ.